# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 884 |
| ಸದಸ್ಯರ ಹೆಸರು | ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | 14-07-2023 |
| ಉತ್ತರಿಸುವ ಸಚಿವರು | ಕೃಷಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ವಿಜಯಪುರ ಜಿಲ್ಲೆಯಾದ್ಯಂತ ಸವಳು-ಜವಳಾಗಿರುವ ಜಮೀನುಗಳೆಷ್ಟು? | ವಿಜಯಪುರ ಜಿಲ್ಲೆಯಲ್ಲಿ 1228 ಹೆಕ್ಟೇರ್ ಪ್ರದೇಶದಷ್ಟು ಸವಳು-ಜವಳು ಭೂಮಿ (ಅಚ್ಚುಕಟ್ಟು ಪ್ರದೇಶವನ್ನು ಹೊರತುಪಡಿಸಿ) ಇರುತ್ತದೆ. |
| ಆ) | ಸವಳು-ಜವಳು ಜಮೀನುಗಳಿರುವ ಜಮೀನುಗಳ ಅಭಿವೃದ್ಧಿಗೆ ಸರ್ಕಾರದ ವತಿಯಿಂದ ಕೈಗೊಂಡಿರುವ ಅಭಿವೃದ್ಧಿ ಯೋಜನೆಗಳಲ್ಲಿ ರಾಸಾಯನಿಕ ಗೊಬ್ಬರದಿಂದ ಹಾಳಾಗಿರುವ ಭೂಮಿ ಎಷ್ಟು; | ಜಲಾನಯನ ಅಭಿವೃದ್ಧಿ ಇಲಾಖೆಯ ವತಿಯಿಂದ ಸವಳು-ಜವಳು ಜಮೀನುಗಳ ಅಭಿವೃದ್ಧಿಗೆ ಆರ್.ಕೆ.ವಿ.ವೈ- ಸಮಸ್ಯಾತ್ಮಕ ಮಣ್ಣುಗಳ ಸುಧಾರಣೆ (RKVY-RPS) ಯೋಜನೆಯಡಿ ವಿಜಯಪುರ ಜಿಲ್ಲೆಯಲ್ಲಿ 336 ಹೆಕ್ಟೇರ್ ಭೂಮಿಯಲ್ಲಿ ಅಂತರ ಬಸಿ ಕಾಲುವೆ (SubSurface Drainage) ಉಪಚಾರವನ್ನು ಕೈಗೊಳ್ಳಲಾಗಿದೆ.<br><br>ಸವಳು-ಜವಳು ಜಮೀನುಗಳಿರುವ ಜಮೀನುಗಳ ಅಭಿವೃದ್ಧಿಗೆ ಸರ್ಕಾರದ ವತಿಯಿಂದ ಕೈಗೊಂಡಿರುವ ಅಭಿವೃದ್ಧಿ ಯೋಜನೆಗಳಲ್ಲಿ ರಾಸಾಯನಿಕ ಗೊಬ್ಬರದಿಂದ ಯಾವುದೇ ಭೂಮಿಯು ಹಾಳಾಗಿರುವ ಬಗ್ಗೆ ವರದಿಯಾಗಿರುವುದಿಲ್ಲ. |
| ಇ) | ಸಾವಯವ ಹಾಗೂ ನೈಸರ್ಗಿಕ ಕೃಷಿ ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು: ಜಿಲ್ಲೆಯಾದ್ಯಂತ ಎಷ್ಟು ಸಾವಯವ ಕೃಷಿ ಭೂಮಿ ಅಭಿವೃದ್ಧಿಪಡಿಸಲಾಗಿದೆ?(ವಿವರ ನೀಡುವುದು) | ಸಾವಯವ ಹಾಗೂ ನೈಸರ್ಗಿಕ ಕೃಷಿ ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು ಈ ಕೆಳಕಂಡಂತಿವೆ.<br><br>**ಅ) ಸಾವಯವ ಕೃಷಿ ಅಳವಡಿಕೆ ಮತ್ತು ದೃಢೀಕರಣ:**<br>ಈ ಕಾರ್ಯಕ್ರಮದಡಿ ರಾಜ್ಯದ ಆಸಕ್ತ ಸಾವಯವ ರೈತ/ಗುಂಪುಗಳ ಕ್ಷೇತ್ರವನ್ನು ಕರ್ನಾಟಕ ರಾಜ್ಯ ಬೀಜ ಮತ್ತು ಸಾವಯವ ಪ್ರಮಾಣನ ಸಂಸ್ಥೆ (KSSOCA)ಯಡಿ ನೋಂದಾಯಿಸಿ ಸಾವಯವ ಪ್ರಮಾಣೀಕರಣದ ವ್ಯಾಪ್ತಿಗೆ ಒಳಪಡಿಸುವ ಸಂಬಂಧದ ವೆಚ್ಚವನ್ನು KSSOCA ಸಂಸ್ಥೆಯ ಮೂಲಕ ಭರಿಸಲಾಗುತ್ತಿದೆ.<br><br>**ಆ) ರೈತಸಿರಿ ಮತ್ತು ಸಿರಿಧಾನ್ಯ ಉತ್ತೇಜನ ಕಾರ್ಯಕ್ರಮಗಳು:**<br>ರಾಜ್ಯದ ಸಿರಿಧಾನ್ಯ ಕ್ಷೇತ್ರವನ್ನು ವಿಸ್ತರಿಸುವ ನಿಟ್ಟಿನಲ್ಲಿ ಪ್ರಮುಖ ಸಿರಿಧಾನ್ಯಗಳಾದ ಊದಲು, ನವಣೆ, ಹಾರಕ, ಕೊರಲೆ, ಸಾಮೆ ಮತ್ತು ಬರಗು ಬೆಳೆಗಳನ್ನು ಬೆಳೆಯುವ ರೈತರಿಗೆ ಬೆಳೆ ಸಮೀಕ್ಷೆ ಆಧಾರದ ಮೇರೆಗೆ ಪ್ರತಿ ಹೆಕ್ಟೇರ್‌ಗೆ ರೂ.10,000/- ಗಳಂತೆ ಗರಿಷ್ಠ 2 ಹೆಕ್ಟೇರ್‌ಗಳಿಗೆ ಪ್ರೋತ್ಸಾಹಧನವನ್ನು ನೀಡಲಾಗುತ್ತಿದೆ.<br><br>ಸಿರಿಧಾನ್ಯಗಳ ಸಂಸ್ಕರಣೆಗೆ ಉತ್ತೇಜನ ನೀಡುವ ಉದ್ದೇಶದೊಂದಿಗೆ ಸಿರಿಧಾನ್ಯಗಳ ಸಂಸ್ಕರಣೆ, ಮೌಲ್ಯವರ್ಧನೆ, ವರ್ಗೀಕರಣ, ಪ್ಯಾಕಿಂಗ್ ಮತ್ತು ಬ್ರ್ಯಾಂಡಿಂಗ್ ಯಂತ್ರೋಪಕರಣಗಳಿಗೆ ಒಟ್ಟು ಯಂತ್ರೋಪಕರಣಗಳ ವೆಚ್ಚದ ಮೇಲೆ ಶೇ.50 ರಷ್ಟು ಅಥವಾ ಗರಿಷ್ಠ ರೂ.10.00 ಲಕ್ಷಗಳವರೆಗೆ ಸಹಾಯಧನವನ್ನು ನೀಡಲಾಗುತ್ತಿದೆ. |

**ಇ) ಸಾವಯವ ಇಂಗಾಲ ಹೆಚ್ಚಿಸುವ ಅಭಿಯಾನ:**

ಮಣ್ಣಿನಲ್ಲಿ ಸಾವಯವ ಇಂಗಾಲ ಹೆಚ್ಚಿಸುವ ಉಪಯುಕ್ತತೆಯ ಬಗ್ಗೆ ರೈತರಿಗೆ ಅರಿವು ಮೂಡಿಸುವ ಸಲುವಾಗಿ ಸಾವಯವ ಇಂಗಾಲ ಹೆಚ್ಚಿಸುವ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸಲು ಫಲಾನುಭವಿ ರೈತರಿಗೆ ಪ್ರತಿ ಹೆಕ್ಟೇರ್‌ಗೆ ರೂ.2500/-ಗಳನ್ನು(ಶೇ.100) ಮೀರದಂತೆ ಸಹಾಯಧನ ನೀಡಲಾಗುತ್ತಿದೆ. ಜೊತೆಗೆ ಹಸಿರೆಲೆ ಗೊಬ್ಬರ ಬಳಕೆಯನ್ನು ಪ್ರೋತ್ಸಾಹಿಸಲು ಎಲ್ಲಾ ವರ್ಗದ ರೈತರಿಗೆ ಶೇ.75ರ ರಿಯಾಯಿತಿ ದರದಲ್ಲಿ ಪ್ರಮುಖವಾಗಿ ಡಯಾಂಚಾ, ಸನ್ನೆಂಪ್ ಇತ್ಯಾದಿ ಹಸಿರೆಲೆ ಗೊಬ್ಬರ ಬೀಜಗಳನ್ನು ವಿತರಣೆ ಮಾಡಲಾಗುತ್ತಿದೆ.

**ಈ) ಜೈವಿಕ ಪೀಡೆನಾಶಕ ಹಾಗೂ ಜೈವಿಕ ನಿಯಂತ್ರಣಾಕಾರಕಗಳ ವಿತರಣಾ ಕಾರ್ಯಕ್ರಮ:**

ಜೈವಿಕ ಪೀಡೆನಾಶಕಗಳ ಬಳಕೆಯನ್ನು ಉತ್ತೇಜಿಸಲು ಹಾಗೂ ಸಾವಯವ ಕೃಷಿಯೆಡೆಗೆ ರೈತರನ್ನು ಕೊಂಡೊಯ್ಯುವ ಉದ್ದೇಶದಿಂದ ಇಲಾಖೆಯ ರೈತ ಸಂಪರ್ಕ ಕೇಂದ್ರಗಳ ಮೂಲಕ ಶೇ. 50 ರ ರಿಯಾಯಿತಿ ದರದಲ್ಲಿ ಜೈವಿಕ ಪೀಡೆನಾಶಕ ಹಾಗೂ ಜೈವಿಕ ನಿಯಂತ್ರಣಾಕಾರಕಗಳನ್ನು ರೈತರಿಗೆ ವಿತರಿಸಲಾಗುತ್ತಿದೆ.

**ಉ) ಕೇಂದ್ರ ಪುರಸ್ಕೃತ - ಆಹಾರ ಮತ್ತು ಪೌಷ್ಟಿಕ ಭದ್ರತೆ (ಹಿಂದಿನ ರಾಷ್ಟ್ರೀಯ ಆಹಾರ ಭದ್ರತಾ ಅಭಿಯಾನ) ಮತ್ತು ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ ಯೋಜನೆ:**

ಬೆಳೆವಾರು ಕಾರ್ಯಕ್ರಮಗಳಡಿ ಸಮಗ್ರ ಪೋಷಕಾಂಶ ನಿರ್ವಹಣೆ ಘಟಕಗಳಡಿ ಜೈವಿಕ ಗೊಬ್ಬರಗಳಾದ ರೈಜೋಬಿಯಂ/PSB ಮತ್ತು ಹಸಿರಲೆ ಬಿತ್ತನೆ ಬೀಜಗಳನ್ನು ಶೇ 50ರ ರಿಯಾಯಿತಿ ದರದಲ್ಲಿ ವಿತರಣೆಗೆ ಅವಕಾಶ ಕಲ್ಪಿಸಲಾಗಿದೆ.

**ಊ) ಮುಖ್ಯಮಂತ್ರಿಗಳ ನೈಸರ್ಗಿಕ ಕೃಷಿ :**

2022-23 ನೇ ಸಾಲಿನಲ್ಲಿ ಯೋಜನೆಯಡಿ ರಾಜ್ಯದ ಕೃಷಿ/ತೋಟಗಾರಿಕಾ ವಿಶ್ವವಿದ್ಯಾಲಯಗಳ ಮೂಲಕ ಪ್ರಾಯೋಗಿಕ ಪ್ರಯೋಗಗಳನ್ನು ಪ್ರತಿ ಕೃಷಿ ವಿಶ್ವವಿದ್ಯಾನಿಲಯಗಳ ವ್ಯಾಪ್ತಿಯ 1000 ಎಕರೆ ರೈತರ ಕ್ಷೇತ್ರಗಳಲ್ಲಿ ಕೈಗೊಳ್ಳಲಾಗಿದ್ದು, ವಿಜಯಪುರ ಜಿಲ್ಲೆಯಲ್ಲಿ ಆಯ್ಕೆಯಾದ ಕ್ಲಸ್ಟರ್ ಗಳಲ್ಲಿನ 100 ಎಕರೆ ಪ್ರದೇಶದ 53 ರೈತರಿಗೆ ತರಬೇತಿ ನೀಡಲಾಗಿರುತ್ತದೆ ಹಾಗೂ ಪ್ರತಿ ರೈತರಿಗೆ ರೂ. 7000/- ಗಳನ್ನು ಪ್ರತಿ ಎಕರೆಗೆ ಪಾವತಿಸಲಾಗಿರುತ್ತದೆ.

APEDA ಅಂಕಿ ಅಂಶಗಳನ್ವಯ 2022-23 ನೇ ಸಾಲಿಗೆ ವಿಜಯಪುರ ಜಿಲ್ಲೆಯಲ್ಲಿ 4903 ರೈತರ 5810.95 ಹೆಕ್ಟೇರ್ ಪ್ರದೇಶವು ಸಾವಯವ ಕೃಷಿಗೆ ಒಳಪಟ್ಟಿರುತ್ತದೆ.

**ಸಂಖ್ಯೆ: AGRI/111/ACT/2023**

**(ಎನ್. ಚಲುವರಾಯ ಸ್ವಾಮಿ)**
ಕೃಷಿ ಸಚಿವರು